# ಪಾಲಿಕೆ ವಲಯ ವಿಂಗಡಣೆ ಚರ್ಚೆ

ಬೆಂಗಳೂರು: ಬಿಬಿಎಂಪಿ ಆಡಳಿತದಲ್ಲಿ ಸುಧಾರಣೆ ತರುವ ಬಗ್ಗೆ ಶಾಸಕ ಎಸ್. ರಘು ಅಧ್ಯಕ್ಷತೆಯಲ್ಲಿ ಸೋಮವಾರ ಜಂಟಿ ಸಲಹಾ ಸಮಿತಿ ಸಭೆ ನಡೆಯಿತು.

ರಘು ಅಧ್ಯಕ್ಷರಾದ ತರುವಾಯ ನಡೆದ ಮೊದಲ ಸಭೆ ಇದಾಗಿತ್ತು. ಕಾನೂನು ಸಚಿವ ಜೆ.ಸಿ.ಮಾಧುಸ್ವಾಮಿ, ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವ ಸುರೇಶ್‌ಕುಮಾರ್ ಮತ್ತಿತರ ಸದಸ್ಯರು ಹಾಗೂ ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು.



» ಜಂಟಿ ಸಲಹಾ ಸಮಿತಿ ಸಭೆ

ಬೆಂಗಳೂರನ್ನು 15 ವಲಯಗಳನ್ನಾಗಿ ವಿಭಜಿಸುವುದು, ಪ್ರತಿ ವಲಯಕ್ಕೂ ಒಬ್ಬ ಐಎಎಸ್ ಅಧಿಕಾರಿ ನೇಮಕ ಮಾಡುವ ಕುರಿತು ವಿಷಯ ಪ್ರಸ್ತಾಪಿಸಲಾಯಿತು.

ಬಿಬಿಎಂಪಿಯ ಈಗಿನ 198 ವಾರ್ಡ್‌ಗಳನ್ನು ಮುಂದುವರಿಸಬೇಕೆ? 124ಕ್ಕೆ ಇಳಿಸಬೇಕೆ?. ಮೇಯರ್, ಉಪ ಮೇಯರ್ ಅಧಿಕಾರಾವಧಿ ಎಷ್ಟು ವರ್ಷ ಇರಬೇಕೆಂಬ ವಿಚಾರ ಸೇರಿ ವಿವಿಧ ವಿಚಾರಗಳ ಬಗ್ಗೆ ಅಧಿಕಾರಿಗಳು ಪ್ರಾಸಂಗಿಕವಾಗಿ ವಿಷಯ ಪ್ರಸ್ತಾಪಿಸಿದರು.

ಇದು ಮೊದಲ ಸಭೆ. ಮುಂದಿನ ಸಭೆಯಲ್ಲಿ ನಿರ್ದಿಷ್ಟ ವಿಷಯಗಳಿಗೆ ಸಂಬಂಧಿಸಿದ ಅಜೆಂಡಾ ಇಟ್ಟುಕೊಂಡು ಚರ್ಚೆ ಮಾಡಲಾಗುವುದು. ಕೆಲ ಸದಸ್ಯರು ಮತ್ತು ಅಧಿಕಾರಿಗಳು ಪ್ರಾಸಂಗಿಕವಾಗಿ ಕೆಲ ವಿಷಯಗಳನ್ನು ಮಾತ್ರ ಈ ಸಭೆಯಲ್ಲಿ ಪ್ರಸ್ತಾಪಿಸಿದ್ದಾರೆ ಎಂದು ರಘು ತಿಳಿಸಿದ್ದಾರೆ.

ಸಭೆ ಬಳಿಕ ಮಾತನಾಡಿದ ಬಿಬಿಎಂಪಿ ಆಯುಕ್ತ ಮಂಜುನಾಥಪ್ರಸಾದ್, ಬೆಂಗಳೂರಿನ ಎಲ್ಲ ಶಾಸಕರು, ವಿಧಾನ ಪರಿಷತ್ ಸದಸ್ಯರು ಒಳಗೊಂಡ ಸಮಿತಿ ಇದಾಗಿದೆ. ಬೆಂಗಳೂರಿಗೆ ಹೊಸ ಕಾಯ್ದೆ ತರುವ ನಿಟ್ಟಿನಲ್ಲಿ ಚರ್ಚೆ ನಡೆದಿದೆ. ಕಾಯ್ದೆ ರಚನೆಗೆ ಕರಡು ತಯಾರಿ ನಡೆಯುತ್ತಿದೆ ಎಂದರು. ಬೆಂಗಳೂರು ಆಡಳಿತ ವ್ಯವಸ್ಥೆ ಹೇಗಿರಬೇಕು ಎನ್ನುವ ಬಗ್ಗೆ ಕೂಡ ಚರ್ಚೆಯಾಗಿದೆ ಎಂದರು.